ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ಹೆಗ್ಗಡದೇವನ ಕೋಟೆಯಿಂದ ಮೈಸೂರಿಗೆ ಹೆಚ್ಚಿನ ಬಸ್ ಸೌಲಭ್ಯ ಕುರಿತು

ಶ್ರೀ ಎಸ್. ನಾಗರಾಜ್(ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

497 (522) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಹೆಗ್ಗಡದೇವನ ಕೋಟೆಯಿಂದ ಮೈಸೂರಿಗೆ ಬೆಳಿಗ್ಗೆ 7 ರಿಂದ 10 ಮತ್ತು ಮೈಸೂರಿನಿಂದ ಹೆಗ್ಗಡದೇವನ ಕೋಟೆಗೆ ಸಂಜೆ 4 ರಿಂದ 7 ರವರೆಗೆ ಹೆಚ್ಚಿನ ಬಸ್ ಸೌಲಭ್ಯ ಕಲ್ಪಿಸಿ, ವಿದ್ಯಾರ್ಥಿಗಳು, ಸರ್ಕಾರಿ ನೌಕರರು, ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಲು ಸರ್ಕಾರ ಕ್ರಮ ತೆಗೆದುಕೊಳ್ಳಲಾಗುವುದೇ;

(ಆ) ಕರೋನ ಪರಿಸ್ಥಿತಿಯ ಕಾರಣ ಹೆಗ್ಗಡದೇವನ ಕೋಟೆ ಬಸ್ ಡಿಪೋನಿಂದ ಹಲವೆಡೆಗೆ ಹೋಗುವ ಗ್ರಾಮೀಣ ಬಸ್ ಸೌಲಭ್ಯ ಸ್ಥಗಿತವಾಗಿತ್ತೆ; ಈ ರೀತಿ ಸ್ಥಗಿತಗೊಂಡಿದ್ದ ಗ್ರಾಮೀಣ ಬಸ್ ಮಾರ್ಗಗಳಲ್ಲಿ ಬಸ್ ಸಂಚಾರವನ್ನು ಪುನರಾರಂಭ ಮಾಡಿ ಗ್ರಾಮೀಣ ಜನತೆಗೆ, ಶಾಲಾ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಲು ಕ್ರಮ ಜರುಗಿಸಲಾಗುವುದೇ;

(ಇ) ಈ ಬಗ್ಗೆ ಸಾರ್ವಜನಿಕರು, ವಿದ್ಯಾರ್ಥಿಗಳು ಒತ್ತಾಯ ಮಾಡಿರುವುದು ಸಂಸ್ಥೆಯ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಪರಿಶೀಲಿಸಿ ಕೂಡಲೇ ಬಸ್ ಸೌಲಭ್ಯ ಕಲ್ಪಿಸಲು ಕ್ರಮ ಜರುಗಿಸಲಾಗುವುದೇ?